ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

8

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯಕರ್ನಾಟಕ ದಿನಾಂಕ : DATE : 12/4/21

# ಬಿಜೆಪಿ ಅಭ್ಯರ್ಥಿಗೆ ಕೋವಿಡ್

ವಿಕ ಸುದ್ದಿಲೋಕ ರಾಯಚೂರು

ಮಸ್ಕಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡ ಪಾಟೀಲರಿಗೆ ಕೊರೊನಾ ಸೋಂಕು ತಗುಲಿದ್ದು ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ.

''ನನಗೆ ಕೋವಿಡ್ ಪಾಸಿಟಿವ್ ಬಂದ ಹಿನ್ನೆಲೆಯಲ್ಲಿ ವೈದ್ಯರ ಸಲಹೆ ಮೇರೆಗೆ ಪ್ರತ್ಯೇಕವಾಗಿ ಇದ್ದೇನೆ. ಯಾರೂ ಆತಂಕ ಪಡಬೇಕಾಗಿಲ್ಲ. ಕಮಲದ ಗುರುತಿಗೆ ಮತ ನೀಡಲು ಕೋರುತ್ತೇನೆ'' ಎಂದು ಪ್ರತಾಪಗೌಡ ಸಂದೇಶದಲ್ಲಿ ಮನವಿ ಮಾಡಿದ್ದಾರೆ.

**ನಡುಕ:** ಸಿಎಂ ಬಿಎಸ್‌ವೈ ಆದಿಯಾಗಿ ಎಲ್ಲರೂ ಬಿಜೆಪಿ ಅಭ್ಯರ್ಥಿ ಜತೆ ಪ್ರಚಾರದಲ್ಲಿ ತೊಡಗಿದ್ದು ಎಲ್ಲರಲ್ಲಿಯೂ ನಡುಕ ಹುಟ್ಟಿಸಿದ.

ಮಸ್ಕಿಯಲ್ಲಿ ಉಪ ಚುನಾವಣೆಯ ಪ್ರಚಾರದ ಕಾವು ಏರಿಕೆಯಾಗುತ್ತಿರುವ ಈ ವೇಳೆಯೇ ಸೋಂಕು ತಗುಲಿರುವುದು ಪಕ್ಷದ ಕಾರ್ಯಕರ್ತರಲ್ಲಿ ಆತಂಕ ಮೂಡಿಸಿದೆ. ಕೆಲವು ದಿನಗಳ ಹಿಂದೆ ಕೋವಿಡ್ ಲಸಿಕೆ ಹಾಕಿಸಿಕೊಂಡಿದ್ದ ಬಿಜೆಪಿ ಅಭ್ಯರ್ಥಿ ಪ್ರತಾಪಗೌಡರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದರು. ಶನಿವಾರವಷ್ಟೇ ಸಿಎಂ ಯಡಿಯೂರಪ್ಪ, ಅವರ ಪುತ್ರ ವಿಜಯೇಂದ್ರ ಸೇರಿದಂತೆ ಬಿಜೆಪಿ ಸರಕಾರ ಅಸ್ತಿತ್ವಕ್ಕೆ ಬರಲು ಕಾರಣರಾದ ಮಿತ್ರ ಮಂಡಳಿಯ ಸಚಿವರಾದ ಬಿ.ಸಿ.ಪಾಟೀಲ್, ಆನಂದಸಿಂಗ್, ಶ್ರೀರಾಮುಲು,ಶಿವರಾಮ ಹೆಬ್ಬಾರ್, ಭೈರತಿ ಬಸವರಾಜ್ ಸೇರಿ ಅನೇಕರೊಂದಿಗೆ ತುರುವಿಹಾಳನಲ್ಲಿ ಬಹಿರಂಗ ಪ್ರಚಾರ ಸಭೆಯಲ್ಲಿ ಪ್ರತಾಪಗೌಡರು ಪಾಲ್ಗೊಂಡಿದ್ದರು.